**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

**ಕ್ರಿ.ಮೊ. ಸಂಖ್ಯೆ :331/2021**

ಪಿರ್ಯಾದಿ ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

-ವಿರುದ್ಧ-

ಆರೋಪಿ/ತರುಃ ಅರುಣ್ ರೋಡ್ರಿಗಸ್ ಬಿನ್ ಸಿರಿಲ್ ರೋಡ್ರಿಗಸ್, 38 ವರ್ಷ, ಚಾಲಕ, ವಾಸಃಮಾವಿನಕೆರೆ ಕಾಲೋನಿ, ಭದ್ರಾವತಿ ತಾಃ ಶಿವಮೊಗ್ಗ ಜಿಲ್ಲೆ.

********

ಆ ಪಾ ದ ನೆ

ದಿನಾಂಕ 11.02.2020 ರಂದು 20-00 ಗಂಟೆ ಸಮಯದಲ್ಲಿ ಚಾಸಾ-1 ಮತ್ತು ಜುಂಜಾನಾಯ್ಕ ರವರು ತರೀಕೆರೆಯಲ್ಲಿ ಕೆಲಸ ಮುಗಿಸಿಕೊಂಡು ವಾಪಾಸ್ ತನ್ನ ಊರಿಗೆ ಹೋಗಲು ಹೊರಟಾಗ ಚಾಸಾ-1 ರವರ ಬಾಬ್ತು ಕೆಎ-66/ಜೆ-5713 ರ ಮೋಟಾರ್ ಸೈಕಲ್ ನ್ನು ಪಡೆದುಕೊಂಡು 20-45 ರ ಸಮಯದಲ್ಲಿ ಲಿಂಗದಹಳ್ಳಿ ಠಾಣಾ ವ್ಯಾಪ್ತಿಯ ಕೆಂಚಾಪುರ ಗೇಟ್ ಹತ್ತಿರ ಹೋಗುತ್ತಿರುವಾಗ ಲಿಂಗದಹಳ್ಳಿ ಕಡೆಯಿಂದ ಬಂದ ಆರೋಪಿಯಾದ ನೀವು ಚಾಸಾ-7 ರವರನ್ನು ಕೆಎ-52/7841 ರ ಲಾರಿಯಲ್ಲಿ ಕೂರಿಸಿಕೊಂಡು ತರೀಕೆರೆ ಕಡೆ ಹೋಗುತ್ತಿರುವಾಗ ದುಡುಕು ಹಾಗೂ ನಿರ್ಲಕ್ಷತನದಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಜುಂಜಾನಾಯ್ಕ ರವರು ಚಾಲನೆ ಮಾಡಿಕೊಂಡು ಬರುತ್ತಿದ್ದ ಸದರಿ ಬೈಕ್ ಗೆ ಡಿಕ್ಕಿ ಪಡಿಸಿದ್ದು, ಆದ್ದರಿಂದ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆಯ ಕಲಂ.**279** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ಹೇಳಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಅಪಘಾತಪಡಿಸಿದ ಪರಿಣಾಮ ಜುಂಜಾನಾಯ್ಕ ರವರು ಸದರಿ ಬೈಕ್ ನಿಂದ ಕೆಳಗೆ ಬಿದ್ದು ಅವರ ತಲೆಯ ಹಿಂದಿನ ಬಲಭಾಗಕ್ಕೆ ಪೆಟ್ಟು ಬಿದ್ದು ತೀವ್ರ ಸ್ವರೂಪದ ಗಾಯವಾಗಿ ಸ್ಥಳದಲ್ಲಿಯೇ ಮೃತಪಟ್ಟಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**304(ಎ)** ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಕೆಎ-52/7841 ರ ಲಾರಿಯನ್ನು ದುಡುಕು ಹಾಗೂ ನಿರ್ಲಕ್ಷತನದಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಮೇಲ್ಕಂಡಂತೆ ಅಪಘಾತಪಡಿಸಿ ಸದರಿ

ವಾಹನವನ್ನು ಸ್ಥಳದಲ್ಲಿ ನಿಲ್ಲಿಸದೆ ಹಾಗೂ ಅಪಘಾತದ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡದೆ ಹೋಗಿದ್ದು, ಆದ್ದರಿಂದ ಆರೋಪಿಯಾದ ನೀವು ಮೋಟಾರು ವಾಹನ ಕಾಯ್ದೆ ಕಲಂ 187 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಪ್ರಶ್ನೆ 1) ಈಗ ಓದಿ ಹೇಳಲಾದ ಆರೋಪಣೆಯನ್ನು ಕೇಳಿ ತಿಳಿದುಕೊಂಡಿರಾ?
ಉತ್ತರಃ-

ಪ್ರಶ್ನೆ 2) ನೀವು ಆರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ-

(ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ, ಕೇಳಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ನಾನೇ ಯಥಾವತ್ತಾಗಿ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆಯೆಂದು ದೃಢೀಕರಿಸುತ್ತೇನೆ.)

ದಿನಾಂಕಃ 27.01.2025

Sd/-
**(ಉರ್ಮಿಳ.ವಿ.)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.